DD office Vija
12-03-2018

<u>ಕರ್ನಾಟಕ ಸರ್ಕಾರ</u>

ಸಂಖ್ಯೆ:ಮಮಅಇ:ಬಾವಿನಿಕೋ:ಸರ್ಕಾರದ ಪತ್ರ:4:2017-18
(ಭಾಗ-2)

ನಿರ್ದೇಶಕರ ಕಛೇರಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
1ನೇ ಮಹಡಿ, ಬಹುಮಹಡಿಗಳ ಕಟ್ಟಡ
ಬೆಂಗಳೂರು-560001. ದಿನಾಂಕ:21-02-2018

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
30 ಜಿಲ್ಲೆಗಳು

ಮಾನ್ಯರೆ,

<u>ವಿಷಯ</u>: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:04-11-2017 ರಂದು ನಡೆದ ಸಭಾ ನಡವಳಿಯಂತೆ ಕ್ರಮವಹಿಸುವ ಕುರಿತು.

<u>ಉಲ್ಲೇಖ</u>: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳವರ ಪತ್ರ ಸಂಖ್ಯೆ:ಮಮಇ 195 ಐಸಿಡಿ 2017 ದಿನಾಂಕ:03-02-2018.

** ** **

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ದಿನಾಂಕ:04.11.2017 ರಂದು ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿದಂತೆ ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಜಾರಿಯಲ್ಲಿದೆಯಾದರೂ ಕೂಡ ಅದನ್ನು ಕಟ್ಟುನಿಟ್ಟಾಗಿ ಅನುಷ್ಠಾನ ಮಾಡಲಾರದ ಕಾರಣ ಈಗಲೂ ಕೂಡ ಬಾಲ್ಯವಿವಾಹದ ಪ್ರಕರಣಗಳು ವರದಿಯಾಗುತ್ತಿವೆ. ಇತ್ತೀಚೆಗೆ ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ 2016 ನ್ನು ಕೂಡ ತರಲಾಗಿದೆ. ಈ ತಿದ್ದುಪಡಿ ಕಾಯ್ದೆ ಪ್ರಕಾರ

- ಈ ತಿದ್ದುಪಡಿ ಕಾಯ್ದೆ ಜಾರಿಗೆ ಬಂದ ನಂತರದ ಪ್ರತಿಯೊಂದು ಬಾಲ್ಯ ವಿವಾಹವು ಪ್ರಾರಂಭದಿಂದಲೇ ಅನೂರ್ಜಿತವಾಗುತ್ತವೆ.
- ಈ ತಿದ್ದುಪಡಿ ಪ್ರಕಾರ ಬಾಲ್ಯವಿವಾಹ ನಿಷೇಧ ಕಾಯ್ದೆ 2006ರ ಸೆಕ್ಷನ್ 9 ಮತ್ತು 13 ರ ಪ್ರಕಾರದ ತಪ್ಪಿತಸ್ಥರು ಒಂದು ವರ್ಷಕ್ಕೆ ಕಡಿಮೆ ಇಲ್ಲದ ಆದರೆ, ಎರಡು ವರ್ಷಗಳ ವರೆಗೆ ವಿಸ್ತರಿಸಬಹುದಾದ ಕಾರಾವಾಸದಿಂದ ಅಥವಾ ಒಂದು ಲಕ್ಷ ರೂಪಾಯಿಗಳವರೆಗೆ ಜುಲ್ಮಾನೆ ಅಥವಾ ಇವೆರಡರಿಂದಲೂ ಶಿಕ್ಷೆಗೆ ಗುರಿಯಾಗುವರು.
- ಈ ತಿದ್ದುಪಡಿ ಪ್ರಕಾರ ಬಾಲ್ಯವಿವಾಹ ನಿಷೇಧ ಕಾಯ್ದೆ 2006ರ ಸೆಕ್ಷನ್ 10 & 11ರ ಪ್ರಕಾರದ ತಪ್ಪಿತಸ್ಥರು ಕನಿಷ್ಠ 1 ವರ್ಷದಿಂದ ಗರಿಷ್ಠ 2 ವರ್ಷಗಳವರೆಗೆ ಕಠಿಣ ಕಾರಾವಾಸ ಮತ್ತು 1 ಲಕ್ಷ ರೂ ವರೆಗೆ ದಂಡದ ಶಿಕ್ಷೆಗೆ ಗುರಿಯಾಗುವರು.
- ಈ ತಿದ್ದುಪಡಿ ಪ್ರಕಾರ ಬಾಲ್ಯವಿವಾಹ ನಿಷೇಧ ಕಾಯ್ದೆ 2006ರ ಸೆಕ್ಷನ್ 11 ಮತ್ತು 13ಕ್ಕೆ ತಿದ್ದುಪಡಿಯಾಗಿದ್ದು ಮಹಿಳೆಯರೂ ಕೂಡ ಕಾರಾವಾಸದ ಶಿಕ್ಷೆಗೆ ಅರ್ಹರಾಗಿರುತ್ತಾರೆ.
- "ಪ್ರತಿಯೊಬ್ಬ ಪೊಲೀಸ್ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ನಡೆದ ಅಪರಾಧದ ಸಂಜ್ಞೇಯತೆಯನ್ನು ಗಮನಿಸಿ ಈ ಅಧಿನಿಯಮದಡಿ, ತಾನಾಗಿಯೇ ಕ್ರಮ ತೆಗೆದುಕೊಳ್ಳತಕ್ಕದ್ದು."

ಆದ್ದರಿಂದ ಬಾಲ್ಯವಿವಾಹಗಳನ್ನು ಕಟ್ಟುನಿಟ್ಟಾಗಿ ತಡೆಯಲು ಮತ್ತು ಬಾಲ್ಯವಿವಾಹ ನಿಷೇಧ ಕಾಯ್ದೆ 2006, ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ 2016 ಮತ್ತು ಬಾಲ್ಯವಿವಾಹ ನಿಷೇಧ ಕರ್ನಾಟಕ ನಿಯಮಾವಳಿಗಳು 2014 ಗಳನ್ನು ಪ್ರಚಾರ ಮಾಡಬೇಕು ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ನಿಮ್ಮ ಜಿಲ್ಲೆಯ ವ್ಯಾಪ್ತಿಯಲ್ಲಿ ಬಾಲ್ಯವಿವಾಹ ತಡೆಯಲು ಕ್ರಮವಹಿಸಿ ಕೈಗೊಂಡ ಕ್ರಮದ ಮಾಹಿತಿಯನ್ನು ಈ ಕಛೇರಿಗೆ ನೀಡಲು ತಿಳಿಸಿದೆ.

ಇನ್ನು ಮುಂದೆ

(1)ಬಾಲ್ಯವಿವಾಹವು ತಾಲ್ಲೂಕು ಕೇಂದ್ರ ಸ್ಥಳದಲ್ಲಿ ನಡೆದಲ್ಲಿ ತಾಲ್ಲೂಕು ಮಟ್ಟದ ಇಲಾಖೆಯ ಬಾಲ್ಯವಿವಾಹ ನಿಷೇದಾಧಿಕಾರಿಗಳನ್ನು(ಸಿ.ಡಿ.ಪಿ.ಓ., ರಕ್ಷಣಾಧಿಕಾರಿಗಳು ಡಿ.ವಿ.ಆಕ್ಟ್) ಹಾಗೂ ಜಿಲ್ಲಾ ಕೇಂದ್ರ ಸ್ಥಾನದಲ್ಲಿ ನಡೆದಾಗ ಇಲಾಖೆಯ ಉಪ ನಿರ್ದೇಶಕರು, ಡಿ.ಸಿ.ಪಿ.ಓ., ನಿರೂಪಣಾಧಿಕಾರಿ ಮತ್ತು ತಾಲ್ಲೂಕು ಕೇಂದ್ರ ಸ್ಥಾನದ ಸಿ.ಡಿ.ಪಿ.ಓ. ರವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು.

(2) ಗ್ರಾಮದಲ್ಲಿ ಬಾಲ್ಯವಿವಾಹ ನಡೆದಲ್ಲಿ ಆ ಗ್ರಾಮಕ್ಕೆ ಸಂಬಂಧಿಸಿದ ಇತರೆ ಇಲಾಖೆಗಳ ಹೋಬಳಿ ಮಟ್ಟದ, ಗ್ರಾಮ ಪಂಚಾಯಿತಿ ಮಟ್ಟದ, ಗ್ರಾಮ ಮಟ್ಟದ ಬಾಲ್ಯವಿವಾಹ ನಿಷೇಧಾಧಿಕಾರಿಗಳನ್ನು ಹಾಗೂ ನಗರ ಸಭೆ ಮತ್ತು ಪುರಸಭೆಗಳಲ್ಲಿ ಬಾಲ್ಯವಿವಾಹ ಜರುಗಿದಲ್ಲಿ ಅಲ್ಲಿಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು ಹೊಣೆಗಾರರಾಗಿರುತ್ತಾರೆ.

ಹೋಬಳಿ, ಗ್ರಾಮ ಪಂಚಾಯಿತಿ, ಗ್ರಾಮ, ಪುರಸಭೆ ವ್ಯಾಪ್ತಿಯ ಬಾಲ್ಯವಿವಾಹ ನಿಷೇಧಾಧಿಕಾಗಳಿಗೆ ಅವರ ಜವಬ್ದಾರಿ ಬಗ್ಗೆ ತಿಳಿಸಿ, ಅವರ ಸಹಕಾರ ಪಡೆದು ಅಲ್ಲಿಯೂ ಕೂಡ ಬಾಲ್ಯವಿವಾಹಗಳು ನಡೆಯದಂತೆ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು.

ತಮ್ಮ ವಿಶ್ವಾಸಿ,

ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಬೆಂಗಳೂರು